ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ತರಬೇತುದಾರರ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) -

31 (320) ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿನ ವಿವಿಧ ವೃಂದದ ಅಧಿಕಾರಿಗಳ, ಸಿಬ್ಬಂದಿಗಳ ಹುದ್ದೆಯ ವೃಂದ ಮತ್ತು ನೇಮಕಾತಿ ನಿಯಮಗಳ ವಿವರಗಳನ್ನು ನೀಡುವುದು ;

(ಆ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ತರಬೇತಿದಾರರ ಮತ್ತು ಸಿಬ್ಬಂದಿಗಳ ಹುದ್ದೆಯನ್ನು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸೇರಿಸಿಕೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಸಂಪೂರ್ಣ ವಿವರವನ್ನು ನೀಡುವುದು; ಕರ್ನಾಟಕ ಕ್ರೀಡಾ ಪ್ರಾಧಿಕಾರವು ಅಸ್ತಿತ್ವಕ್ಕೆ ಬಂದು 20 ವರ್ಷಗಳಾಗಿದ್ದರೂ ಮಾಡದೇ ಇರಲು ಕಾರಣವೇನು ; ಇದಕ್ಕೆ ಇರುವ ಅಡೆತಡೆಗಳೇನು ; ಈ ಅಡೆತಡೆಗಳನ್ನು ನಿವಾರಿಸಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ತರಬೇತಿದಾರರ ಮತ್ತು ಸಿಬ್ಬಂದಿಗಳ ಹುದ್ದೆಯನ್ನು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸೇರಿಸಿಕೊಳ್ಳಲಾಗುವುದೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸೇರಿಸಿಕೊಳ್ಳಲಾಗುವುದು ;

(ಇ) ತರಬೇತಿದಾರರ ಮತ್ತು ಸಿಬ್ಬಂದಿಗಳ ಸೇವೆಯನ್ನು ಈ ಹಿಂದೆ ಸದನದಲ್ಲಿ ಚರ್ಚಿಸಿದಂತೆ ಸಕ್ರಮ ಖಾಯಂಮಾತಿ ಮಾಡಲು ಕೈಗೊಂಡಿರುವ ಕ್ರಮದ ವಿವರಗಳೇನು ; ಸಕ್ರಮ ಖಾಯಂಮಾತಿಯ ಕಾರ್ಯ ಯಾವ ಹಂತದಲ್ಲಿದೆ; ಸದನದಲ್ಲಿ ಖಾಯಂಮಾತಿ ಮಾಡಲು ಭರವಸೆ ನೀಡಲಾಗಿತ್ತೆ ;

(ಈ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ತರಬೇತುದಾರರ, ಸಿಬ್ಬಂದಿಗಳ ವೃಂದವಾರು ವಿವರ ನೀಡುವುದು ; ಅದರಲ್ಲಿ ಖಾಯಂ ನೌಕರರ ಹಾಗೂ ಗುತ್ತಿಗೆ ನೌಕರರ ವಿವರಗಳನ್ನು ನೀಡುವುದು ; ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ ಎನ್ನುವುದರ ಬಗ್ಗೆ ಸಂಪೂರ್ಣ ವಿವರ ನೀಡುವುದು ;

(ಉ) ಪ್ರತಿ ವರ್ಷ ಎಷ್ಟು ಜನ ನೌಕರರನ್ನು, ಯಾವ ವೃಂದದ ನೌಕರರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುತ್ತಿದೆ ; (ಕಳೆದ 05 ವರ್ಷದ ಮಾಹಿತಿ ನೀಡುವುದು)

(ಊ) ಕರ್ನಾಟಕ ಕ್ರೀಡಾ ಪ್ರಾಧಿಕಾರವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಬೇರ್ಪಡಿಸಲು ಸಾಧ್ಯವಾಗುವುದೇ ; ಸಾಧ್ಯವಾಗದಿದ್ದಲ್ಲಿ, ಅದಕ್ಕೆ ಕಾರಣವೇನು ? (ಸಂಪೂರ್ಣ ವಿವರ ನೀಡುವುದು)